# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಯಾವಾಗ ಧರ್ಮದ ಅವನತಿ ಆಗುವುದೋ
ಯಾವಾಗ ಅಧರ್ಮದಲ್ಲಿ ಉನ್ನತಿ ಆಗುವುದೋ
ಆಗೆಲ್ಲಾ ಸತ್ಪುರುಷರ ಉದ್ಧಾರಕ್ಕಾಗಿ,
ಅಧರ್ಮಿಯರ ವಿನಾಶಕ್ಕಾಗಿ,
ಧರ್ಮದ ಪುನಃಸ್ಥಾಪನೆಗಾಗಿ
ನಾನು ಮತ್ತೆ ಮತ್ತೆ ಜನ್ಮ ತಾಳುತ್ತೇನೆ..
ಇದು ಪ್ರತಿ ಯುಗದಲ್ಲಿಯೂ ಆಗುತ್ತಲಿದೆ..
ಮುಂದೆಯೂ ಸದಾ ಆಗುತ್ತಲೇ ಇರುವುದು..
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 29-08-2025 to 04-09-2025 ಬೆಲೆ: 7-00 ಸಂಪುಟ–5 ಸಂಚಿಕೆ–10 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು




ಗಣೇಶ ಚತುರ್ಥಿ ನಾಡಿನೆಲ್ಲಡೆ ಸಂಭ್ರಮವನ್ನು ಪಸರಿಸುವುದರ ಜೊತೆಗೆ ಜನರನ್ನು ಭಕ್ತಿ ಭಾವದಲ್ಲಿ ಮಿಂದೇಳುವಂತೆ ಮಾಡಿದೆ. ಒಂದು ಕಾಲದಲ್ಲಿ ಮನೆ ಮನೆಯಲ್ಲಿ ಆರಾದಿಸಲ್ಪಡುತ್ತಿದ್ದ ಗಣೇಶ 1892ರಲ್ಲಿ ಲೋಕಮಾನ್ಯ ತಿಲಕರು ಬ್ರಿಟೀಷರ ನಿಷೇಧವನ್ನು ತಪ್ಪಿಸಲು ಪುಣೆ ಮತ್ತು ಮುಂಬೈನ ಗಿರ್ಗಾವ್‌ನಲ್ಲಿ ಸಾರ್ವಜನಿಕವಾಗಿ ಪ್ರಾರಂಭಿಸಿದರು. ಅಂದಿನಿಂದ ಇಂದಿನವರೆಗೂ ನಾಡಿನ ಎಲ್ಲೆಡೆ ಗಣೇಶ ವಿಜ್ರಂಭಿಸುತ್ತಿದ್ದಾನೆ.

## ಪಂಪ್‌ವೆಲ್‌ನಲ್ಲಿ ಮತ್ತೆ ವೈಭವಿಸಲಿದೆ ಕಳಶದ ಸೌಂದರ್ಯ



**ಮಂಗಳೂರು:** ಒಂದು ಕಾಲದಲ್ಲಿ ಮಂಗಳೂರಿಗೆ ಶೋಭೆ ತರುತ್ತಿದ್ದ ಪಂಪ್‌ವೆಲ್‌ನ ಕಳಶವನ್ನು ತೆರವುಗೊಳಿಸಿ ಸುಮಾರು ಹತ್ತು ವರ್ಷಗಳೇ ಕಳೆದುಹೋಗುತ್ತಿದೆ. ಮಂಗಳೂರಿಗೆ ಕೇರಳ, ಬೆಂಗಳೂರು ಮೈಸೂರು ಕಡೆಗಳಿಂದ ಬರುವ ಪ್ರವಾಸಿಗರಂತೂ ಬೃಹತ್ ಗಾತ್ರದ ಕಳಶ ನೋಡಿ ಪುಳಕಿತರಾಗುತ್ತಿದ್ದರು. ಪಂಪ್‌ವೆಲ್‌ಗೆ 2003ರಲ್ಲಿ ಬೃಹತ್ ಕಲಶವಿಟ್ಟು ಮಹಾವೀರ ಸರ್ಕಲ್ ನಾಮಕರಣ ಮಾಡಲಾಗಿತ್ತು. ಮಂಗಳೂರು ಜೈನ್ ಸೊಸೈಟಿ ಇದರ ಉಸ್ತುವಾರಿ ವಹಿಸಿದ್ದರು. ಮಂಗಳೂರಿಗರಿಗಂತೂ ಪಂಪ್‌ವೆಲ್ ಕಳಶ ಹೆಮ್ಮೆ ಎನಿಸುವ ಮಟ್ಟಿಗೆ ಖುಷಿಕೊಡುತ್ತಿತ್ತು. ಆದರೆ ರಾಷ್ಟ್ರೀಯ ಹೆದ್ದಾರಿ 3ನೇ ಪುಟಕ್ಕೆ




## ಸೌಹಾರ್ದತೆಯೇ ಭಾರತದ ಶಕ್ತಿ –ಖಾದರ್



**ಮಂಗಳೂರು:** ಎಲ್ಲ ಜಾತಿ–ಧರ್ಮಗಳ ನಡುವೆ ಇರುವ ಪರಸ್ಪರ ಸೌಹಾರ್ದತೆಯೇ ಭಾರತ ದೇಶದ ದೊಡ್ಡ ಶಕ್ತಿಯಾಗಿದೆ. ಇಲ್ಲಿನ ಸಂಸ್ಕೃತಿ–ಸಂಸ್ಕಾರವನ್ನು ಯುವ ಜನಾಂಗಕ್ಕೆ ವರ್ಗಾಯಿಸಲು ಗಣೇಶೋತ್ಸವದಂತಹ ಹಬ್ಬಗಳು ಪೂರಕವಾಗಿವೆ ಎಂದು ವಿಧಾನಸಭೆಯ ಸಭಾಪತಿ ಯು.ಟಿ.ಖಾದರ್ ಹೇಳಿದರು. ಅವರು ಮಂಗಳೂರಿನ ಬಂಟ್ಸ್ ಹಾಸ್ಟೆಲ್‌ನಲ್ಲಿ ಬಂಟರ ಯಾನೆ ನಾಡವರ ಮಾತೃ ಸಂಘ ಶ್ರೀ ಸಿದ್ಧಿವಿನಾಯಕ ಪ್ರತಿಷ್ಠಾನ ಸಾರ್ವಜನಿಕ ಶ್ರೀ ಗಣೇಶೋತ್ಸವ ಸಮಿತಿಯಿಂದ ನಡೆಯುತ್ತಿರುವ 19ನೇ ವರ್ಷದ ಸಾರ್ವಜನಿಕ ಶ್ರೀ ಗಣೇಶೋತ್ಸವದ ಮೊದಲ ದಿನದ ಧಾರ್ಮಿಕ ಸಭೆಯ ಮುಖ್ಯ ಅತಿಥಿಯಾಗಿ ಮಾತನಾಡಿ, ಹಿರಿಯರು ಹಾಕಿ ಕೊಟ್ಟ 3ನೇ ಪುಟಕ್ಕೆ

## ರನ್ ವೇ ವಿಸ್ತರಣೆ ಅಗತ್ಯ –ಕ್ಯಾ. ಬ್ರಿಜೇಶ್ ಚೌಟ



**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೆಲೆಗೊಂಡಿರುವ ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಸುರಕ್ಷತೆ ದೃಷ್ಟಿಯಿಂದ ರನ್ ವೇ ವಿಸ್ತರಣೆ ಅಗತ್ಯವಾಗಿದೆ. ಶೀಘ್ರದಲ್ಲೇ 45 ಎಕರೆ ಭೂಮಿಯನ್ನು ವಶಕ್ಕೆ ಪಡೆದು ವಿಸ್ತರಣೆ ಕಾರ್ಯ ನಡೆಯಲಿದೆ ಎಂದು ದ.ಕ. ಸಂಸದ ಕ್ಯಾ. ಬ್ರಿಜೇಶ್ ಚೌಟ ಹೇಳಿದ್ದಾರೆ. ಮಂಗಳೂರು ವಿಮಾನ ನಿಲ್ದಾಣಕ್ಕೆ ಪಾಯಿಂಟ್ ಆಫ್ ಕಾಲ್ ಮಾನ್ಯತೆ ಒದಗಿಸಲು ವಿಮಾನಯಾನ ಸಚಿವಾಲಯದೊಂದಿಗೆ ಸಂಪರ್ಕದಲ್ಲಿದ್ದೇನೆ. ಪ್ರಯಾಣಿಕರ 3ನೇ ಪುಟಕ್ಕೆ







## ಸುದ್ದಿ ತುಣುಕು

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಕಾಂಗ್ರೆಸ್ ನಾಯಕರಿಗೆ ಪ್ರಜಾಪ್ರಭುತ್ವದಲ್ಲಿ ವಿಶ್ವಾಸವಿಲ್ಲ ಎಂದು ಹೇಳಿದ್ದಾರೆ.

"ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸಿರುವುದಕ್ಕೆ ನನ್ನ ತಕರಾರು ಏನೂ ಇಲ್ಲ. ಆದರೆ ಉದ್ಘಟನ ಬೇಡ" ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರ ಸ್ವಾಮಿ ಹೇಳಿದ್ದಾರೆ.

ರಾಯಚೂರು ಎಪಿಎಂಸಿ ಮಾರುಕಟ್ಟೆಗೆ ಉಪ ಲೋಕಾಯುಕ್ತ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು.

"ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಕರೆಯುತ್ತಾರೆ. ದೀಪಾ ಭಸ್ತಿ ಅವರನ್ನು ಯಾಕೆ ಕರೆದಿಲ್ಲ?" ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪ್ರಶ್ನಿಸಿದರು.

ಈ ಬಾರಿಯ ನಾಡಹಬ್ಬ ದಸರಾ ಉದ್ಘಾಟಕರ ಆಯ್ಕೆ ಬಗ್ಗೆ ರಾಜಕೀಯ ನಾಯಕರು ನೀಡುತ್ತಿರುವ ಹೇಳಿಕೆಗಳು ಚಾಮುಂಡೇಶ್ವರಿ ದೇವಾಲಯದ ವಿಚಾರವನ್ನೂ ತೆರೆದುಕೊಂಡಿದ್ದು, ಈ ಬಗ್ಗೆ ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರು ಬಹಿರಂಗ ಪತ್ರ ಬರೆದಿದ್ದಾರೆ.

ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿನ ನಲ್ಲೂರು ಗ್ರಾಮದಲ್ಲಿ ಸದಾ ಬಿಳಿ ಮೊಟ್ಟೆಗಳನ್ನು ಇಡುತ್ತಿದ್ದ ನಾಟಿ ಕೋಳಿಯೊಂದು ನೀಲಿ ಬಣ್ಣದ ಮೊಟ್ಟೆ ಇಟ್ಟಿದ್ದು, ಜನರನ್ನು ಅಚ್ಚರಿಗೆ ದೂಡುವಂತೆ ಮಾಡಿದೆ.

ವಿಚಾರಣಾ ನ್ಯಾಯಾಲಯದ ಕ್ರಮ ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯ ಪೀಠ, ನಿಷ್ಕ್ರಿಯಗೊಂಡಿರುವ ಮೈಸೂರು ರೇಷ್ಮೆ ತಯಾರಕರ ಸಂಘದ ಆಸ್ತಿಗಳನ್ನು ಸ್ವಾಧೀನಕ್ಕೆ ಪಡೆಯಲು ರಾಜ್ಯ ಸರ್ಕಾರ ಮುಂದಾಗುವಂತೆ ನಿರ್ದೇಶನ ನೀಡಿದೆ.

ಮಂಗಳೂರು ಕುಕ್ಕರ್ ಸ್ಫೋಟ ಪ್ರಕರಣದ ಆರೋಪಿಗಳನ್ನು ವಿಚಾರಣೆ ನಡೆಸಲು ಜಾರಿ ನಿರ್ದೇಶನಾಲು ಮುಂದಾಗಿದೆ. ಜೈಲಿನಲ್ಲಿ ಆರೋಪಿಗಳನ್ನು ವಿಚಾರಣೆ ನಡೆಸಲಿರುವ ಇಡಿ, ಹಣದ ಹರಿವಿನ ಮೂಲ ಪತ್ತೆಹಚ್ಚಲಿದೆ.

ಗಣೇಶ ಚತುರ್ಥಿಯ ಹಿನ್ನೆಲೆಯಲ್ಲಿ ನೈಜ ಸ್ವರೂಪದ ವಿನಾಯಕನಾದ ಗಜಪಡೆಗೆ ಅರಮನೆ ಮುಂಭಾಗದಲ್ಲಿ ಸಾಂಪ್ರದಾಯಿಕ ಪೂಜೆ ಸಲ್ಲಿಸುವ ಮೂಲಕ ಗಣೇಶ ಚತುರ್ಥಿಯನ್ನು ಆಚರಿಸಲಾಯಿತು.

ಚಾಮುಂಡಿಯನ್ನು ನಾಡದೇವತೆ ಅಂತ ಕರೆಯುತ್ತೇವೆ. ರಾಜವಂಶಸ್ಥರು, ಸರ್ಕಾರ ಇಬ್ಬರು ಕರೆಯೋರು ಹಾಗೆ. ಇದು ಸರ್ಕಾರದ ಆಸ್ತಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಮುಂದಿನ ವರ್ಷ ಅಸ್ಸಾಂ ವಿಧಾನಸಭೆ ಚುನಾವಣೆ ಹಿನ್ನೆಲೆ ಕಾರ್ಯತಂತ್ರಗಳ ಕುರಿತು ಚರ್ಚಿಸುವ ಸಲುವಾಗಿ ರಾಜ್ಯ ಬಿಜೆಪಿ ಕೋರ್ ಕಮಿಟಿ ಸಭೆಯಲ್ಲಿ ಭಾಗಿಯಾಗಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಎರಡು ದಿನ ಅಸ್ಸಾಂ ಪ್ರವಾಸ ಕೈಗೊಂಡಿದ್ದಾರೆ.

ಪ್ರಶ್ನೆ ಪತ್ರಿಕೆ ಸೋರಿಕೆಯಿಂದಾಗಿ ರಾಜಸ್ಥಾನ ಹೈಕೋರ್ಟ್ SI ನೇಮಕಾತಿ ಪರೀಕ್ಷೆ –2021 ಅನ್ನು ರದ್ದುಗೊಳಿಸಿದೆ.

ಕತ್ರಾ ಜಿಲ್ಲೆಯಲ್ಲಿರುವ ಪ್ರಸಿದ್ಧ ವೈಷ್ಣೋದೇವಿ ಯಾತ್ರಾಸ್ಥಳದ ರಸ್ತೆಮಾರ್ಗದಲ್ಲಿ ಮಂಗಳವಾರ ಸಂಭವಿಸಿದ ಭಾರೀ ಭೂಕುಸಿತದಲ್ಲಿ ಸಾವನ್ನಪ್ಪಿದವರ ಸಂಖ್ಯೆ 35ಕ್ಕೆ ಏರಿಕೆಯಾಗಿದೆ.

ನೇಪಾಳದ ಮೂಲಕ ಮೂವರು ಪಾಕಿಸ್ತಾನಿ ಭಯೋತ್ಪಾದಕರು ರಾಜ್ಯಕ್ಕೆ ಪ್ರವೇಶಿಸಿದ್ದಾರೆ ಎಂಬ ಗುಪ್ತಚರ ಮಾಹಿತಿ ಹಿನ್ನೆಲೆಯಲ್ಲಿ ಬಿಹಾರ ಪೊಲೀಸ್ ಪ್ರಧಾನ ಕಚೇರಿಯು ರಾಜ್ಯದಲ್ಲಿ ಹೈ ಅಲರ್ಟ್ ಘೋಷಿಸಿದೆ.

2030ರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಅಹಮದಾಬಾದ್‌ನಲ್ಲಿ ಆಯೋಜಿಸುವ ಬಿಡ್‌ಗೆ ಕೇಂದ್ರ ಸಚಿವ ಸಂಪುಟವು ಅನುಮೋದನೆ ನೀಡಿದೆ.

## ಗಸಗಸೆ ಪಾಯಸ



**ಸಾಮಾಗ್ರಿಗಳು :**
ಗಸಗಸೆ – 5 ಚಮಚ
ಬೆಲ್ಲ – 1 ಕಪ್
ಗೋಡಂಬಿ – 5–10
ದ್ರಾಕ್ಷಿ – 5–10
ನೀರು – 2/1 ಲೋಟ
ಹಾಲು – 1 ಲೋಟ ಗಟ್ಟಿ ಹಾಲು
ತೆಂಗಿನತುರಿ – 1 ಕಪ್
ಏಲಕ್ಕಿ – 2

**ಮಾಡುವ ವಿಧಾನ :**
ದಪ್ಪ ತಳದ ಪಾತ್ರೆಯಲ್ಲಿ ಗಸಗಸೆಯನ್ನು ಎಣ್ಣೆ ಹಾಕದೆ ಹೊಂಬಣ್ಣ ಬರುವವರೆಗೆ ಹುರಿದು, ತಣ್ಣಗಾಗಿಸಬೇಕು. ಈ ನಡುವೆ ಬಿಸಿಯಾದ ಪಾತ್ರೆಯಲ್ಲಿ ಬೆಲ್ಲವನ್ನು ಹಾಕಿ, ಇದಕ್ಕೆ ಕಾಲು ಗ್ಲಾಸ್ ನೀರನ್ನು ಸೇರಿಸಿ ಚೆನ್ನಾಗಿ ಕದಡಿ ಬೆಲ್ಲವನ್ನು ಸಂಪೂರ್ಣವಾಗಿ ಕರಗಿಸಬೇಕು, ಗಸಗಸೆಯನ್ನು ತೆಂಗಿನ ತುರಿ ಮತ್ತು ಏಲಕ್ಕಿ ಜೊತೆ ಸೇರಿಸಿ ಮಿಕ್ಸಿಯಲ್ಲಿ ಹಾಕಿ ರುಬ್ಬಿಕೊಳ್ಳಬೇಕು. ಇದು ಮೃದುವಾದ ಪೇಸ್ಟ್‌ನಂತೆ ಆಗಲು ಕಾಲು ಕಪ್ ನೀರನ್ನು ಸೇರಿಸಿಕೊಳ್ಳಬೇಕು. ಬೆಲ್ಲ ಕರಗಿದ ಮೇಲೆ ರುಬ್ಬಿಕೊಂಡ ಗಸಗಸೆ ಪೇಸ್ಟನ್ನು ಸೇರಿಸಿ. 2-3 ನಿಮಿಷಗಳ ಕಾಲ ಚೆನ್ನಾಗಿ ಕುದಿಯಲು ಬಿಡಿ. ಈಗ ಇದಕ್ಕೆ ಗಟ್ಟಿ ಹಾಲು ಮತ್ತು ಕರಿದ ಗೋಡಂಬಿ ದ್ರಾಕ್ಷಿಯನ್ನು ಸೇರಿಸಿ, ತಳ ಹಿಡಿಯುವುದನ್ನು ತಡೆಯಲು ಆಗಾಗ ಕೈಯಾಡಿಸುತ್ತಾ ಚೆನ್ನಾಗಿ ಕುದಿಸಬೇಕು. ಈಗ ಬಿಸಿ ಬಿಸಿಯಾದ ಗಸಗಸೆ ಪಾಯಸ ಸವಿಯಲು ಸಿದ್ಧ.

## ಅಮೇರಿಕಾಕ್ಕೆ ಅಂಚೆ ಸೇವೆ ಸ್ಥಗಿತಗೊಳಿಸಿದ 25 ದೇಶಗಳು



ಜಿನೀವಾ: ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೆಚ್ಚುತ್ತಿರುವ ಸುಂಕದ ಪರಿಣಾಮದ ಬಗ್ಗೆ ಕಳವಳ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕನಿಷ್ಠ 25 ದೇಶಗಳು ಯುನೈಟೆಡ್ ಸ್ಟೇಟ್ಸ್ಗೆ ಪ್ಯಾಕೇಜ್ ವಿತರಣೆಯನ್ನು ಸ್ಥಗಿತಗೊಳಿಸಲು ನಿರ್ಧರಿಸಿವೆ ಎಂದು ಯುಎನ್ ಸಂಸ್ಥೆ ತಿಳಿಸಿದೆ. ಆಗಸ್ಟ್ 29 ರಿಂದ ಯುನೈಟೆಡ್ ಸ್ಟೇಟ್ಸ್ಗೆ ಪ್ರವೇಶಿಸುವ ಸಣ್ಣ ಪ್ಯಾಕೇಜ್ಗಳ ಮೇಲಿನ ತೆರಿಗೆ ವಿನಾಯಿತಿಯನ್ನು ರದ್ದುಗೊಳಿಸುವುದಾಗಿ ಟ್ರಂಪ್ ಆಡಳಿತ ಕಳೆದ ತಿಂಗಳ ಕೊನೆಯಲ್ಲಿ ಹೇಳಿತ್ತು. 25 ಸದಸ್ಯ ರಾಷ್ಟ್ರಗಳು ಈಗಾಗಲೇ ಸಲಹೆ ನೀಡಿವೆ ಎಂದು ವಿಶ್ವಸಂಸ್ಥೆಯ ಯುನಿವರ್ಸಲ್ ಪೋಸ್ಟಲ್ ಯೂನಿಯನ್ ಹೇಳಿದೆ.

## ಮೋದಿಗೆ ಧನ್ಯವಾದ ಸಲ್ಲಿಸಿದ ಉಕ್ರೇನ್ ಅಧ್ಯಕ್ಷ

ಕೀವ್: ಉಕ್ರೇನ್ ಸ್ವಾತಂತ್ರ್ಯ ದಿನದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಶುಭ ಕೋರಿರುವುದಕ್ಕೆ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಧನ್ಯವಾದ ಅರ್ಪಿಸಿದ್ದಾರೆ. ಇದೇ ವೇಳೆ, ರಷ್ಯಾ ಜೊತೆಗಿನ ಯುದ್ಧ ಕೊನೆಗೊಳಿಸುವಲ್ಲಿ ಭಾರತದ ಕೊಡುಗೆಯನ್ನು ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಝೆಲನ್ಸ್ಕಿ, ಭಾರತದಿಂದ ಶಾಂತಿ ಮತ್ತು ಮಾತುಕತೆಯನ್ನು ಉಕ್ರೇನ್ ಎದುರು ನೋಡುತ್ತಿದೆ. ಇಡೀ ಜಗತ್ತು ಭಯಾನಕ ಯುದ್ಧವನ್ನು ಶಾಂತಿ ಮತ್ತು ಘನತೆಯಿಂದ ಕೊನೆಗೊಳಿಸಲು ನೋಡುತ್ತಿದ್ದು, ನಮಗೆ ಭಾರತದಿಂದ ನಿರೀಕ್ಷೆಗಳಿವೆ ಎಂದಿದ್ದಾರೆ.



## ಚೀನಾ ಮ್ಯಾಗ್ನೆಟ್ ನೀಡದಿದ್ದರೆ ಪರಿಣಾಮ ನೆಟ್ಟಗಿರಲ್ಲ – ಟ್ರಂಪ್



ವಾಷಿಂಗ್ಟನ್ : ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಬೆದರಿಕೆ ಬುದ್ಧಿ ಮುಂದುವರಿಸಿದ್ದಾರೆ. ಭಾರತದ ಮೇಲೆ ಬಾರಿ ಬಾರಿ ಹರಿಹಾಯ್ದಿರುವ ಟ್ರಂಪ್ ಈಗ ಚೀನಾ ಮೇಲೆ ಮತ್ತೆ ವಾಗ್ದಾಳಿ ನಡೆಸಿದ್ದಾರೆ. ಚೀನಾವೇನಾದರೂ ತಮಗೆ ಮ್ಯಾಗ್ನೆಟ್ ನೀಡಲಿಲ್ಲವೆಂದರೆ ಪರಿಣಾಮ ನೆಟ್ಟಗಿರಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಅಮೆರಿಕಕ್ಕೆ ಚೀನಾ ವಿರಳ ಭೂ ಅಯಸ್ಕಾಂತಗಳನ್ನು ಒದಗಿಸಬೇಕು. ಇಲ್ಲದಿದ್ದರೆ ಟ್ಯಾರಿಫ್ ಅನ್ನು ಶೇ. 200ಕ್ಕೆ ಏರಿಸುತ್ತೇವೆ' ಎಂದು ನೇರವಾಗಿ ಬೆದರಿಕೆ ಹಾಕಿದ್ದಾರೆ. ಅದರಲ್ಲಿ ನಮಗೇನೂ ಸಮಸ್ಯೆ ಇಲ್ಲ' ಎಂದು ಅಮೆರಿಕ ಅಧ್ಯಕ್ಷರು ತಿಳಿಸಿದ್ದಾರೆ.

## ಅಮೆರಿಕದ ವಲಸಿಗರ ಸಂಖ್ಯೆಯಲ್ಲಿ 15 ಲಕ್ಷ ಕುಸಿತ

ವಾಷಿಂಗ್ಟನ್: ಅಮೆರಿಕಕ್ಕೆ ಹೋಗಲಿಚ್ಛಿಸುವ ಅಥವಾ ಅದಾಗಲೇ ನೆಲೆಸಿರುವ ವಸಲಿಗರ ಪಾಲಿಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ರ ವಲಸೆ ನೀತಿಗಳು ದುಃಸ್ವಪ್ನವಾಗಿ ಪರಿಣಮಿಸಿವೆ. ಇದಕ್ಕೆ ಸಾಕ್ಷಿಯೆಂಬಂತೆ, ಈ ವರ್ಷದ ಜನವರಿಯಿಂದ ಜೂನ್ ನಡುವೆ ಅಮೆರಿಕದಲ್ಲಿರುವ ವಲಸಿಗರ ಸಂಖ್ಯೆಯಲ್ಲಿ 15 ಲಕ್ಷ ಇಳಿಕೆಯಾಗಿದೆ. ಹೀಗಾಗಿರುವುದು 1960ರ ಬಳಿಕ ಇದೇ ಮೊದಲು. ಪ್ಯೂ ಸಂಶೋಧನಾ ಸಂಸ್ಥೆಯ ವರದಿ ಪ್ರಕಾರ, 6ತಿಂಗಳಲ್ಲಿ 15ಲಕ್ಷ ಇಳಿಕೆಯಿಂದಾಗಿ, ಕಳೆದ ವರ್ಷ 5.3 ಕೋಟಿ ಇದ್ದ ವಲಸಿಗರ ಸಂಖ್ಯೆ 5.1 ಕೋಟಿಗೆ ಕ್ಷೀಣಿಸಿದೆ.



## ಶ್ರೀಲಂಕಾ ಮಾಜಿ ಅಧ್ಯಕ್ಷ ರನಿಲ್ ವಿಕ್ರಮ ಸಿಂಘೆ ಬಂಧನ



ಶ್ರೀಲಂಕಾ : ಶ್ರೀಲಂಕಾದ ಮಾಜಿ ಅಧ್ಯಕ್ಷ ರನಿಲ್ ವಿಕ್ರಮಸಿಂಘೆ ಅವರನ್ನು ಸರ್ಕಾರಿ ಹಣ ದುರುಪಯೋಗ ಮಾಡಿರುವ ಆರೋಪದ ಮೇಲೆ ಇಂದು ಬಂಧಿಸಲಾಗಿದೆ. ವಿಕ್ರಮಸಿಂಘೆ (76) ಅವರನ್ನು ಕ್ರಿಮಿನಲ್ ತನಿಖಾ ಇಲಾಖೆ (ಸಿಐಡಿ) ಪ್ರಧಾನ ಕಚೇರಿಯಲ್ಲಿ ಬಂಧಿಸಲಾಯಿತು. ಸರ್ಕಾರಿ ನಿಧಿ ದುರುಪಯೋಗ ಆರೋಪದ ತನಿಖೆಗೆ ಸಂಬಂಧಿಸಿದಂತೆ ಹೇಳಿಕೆ ದಾಖಲಿಸಲು ಅವರನ್ನು ಅಲ್ಲಿಗೆ ಕರೆಸಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಇಂಗ್ಲೆಂಡ್‌ಗೆ ಪ್ರಯಾಣಿಸುವುದಕ್ಕಾಗಿ ರಾಜ್ಯದ ಹಣ ಬಳಸಿಕೊಂಡಿದ್ದಾರೆ ಎಂದು ಅವರ ಮೇಲೆ ಆರೋಪ ಹೊರಿಸಲಾಗಿದೆ.

## ಪುಟಿನ್–ಝೆಲೆನ್ಸ್ಕಿ ಭೇಟಿ ಸಾಧ್ಯತೆ ಕಡಿಮೆ:ಅಮೇರಿಕಾ

ನವದೆಹಲಿ: ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧ ಕೊನೆಗಾಣಿಸುವ ನಿಟ್ಟಿನಲ್ಲಿ ಶೀಘ್ರದಲ್ಲೇ ರಷ್ಯಾ ಅಧ್ಯಕ್ಷ ವ್ಲಾಡ್ಲಿಮಿರ್ ಪುಟಿನ್ ಹಾಗೂ ಉಕ್ರೇನ್ ಅಧ್ಯಕ್ಷ ವೊಲಿಡಿಮಿರ್ ಝೆಲನ್ಸ್ಕಿ ನಡುವೆ ಮಾತುಕತೆ ನಡೆಯಲಿದೆ ಎಂಬ ನಿರೀಕ್ಷೆ ಇತ್ತು. ಆದರೆ, ಮಾಸ್ಕೋದ ಕೆಲವು ದೀರ್ಘಕಾಲದ ಬೇಡಿಕೆಗಳಿಗೆ ಉಕ್ರೇನಿಯನ್ನರು ಒಪ್ಪುವವರೆಗೆ ಪುಟಿನ್ ಝೆಲೆನ್ಸ್ಕಿಯನ್ನು ಭೇಟಿಯಾಗುವುದಿಲ್ಲ ಎಂದು ರಷ್ಯಾದ ಉನ್ನತ ರಾಜತಾಂತ್ರಿಕರೊಬ್ಬರು ಶುಕ್ರವಾರ ಸ್ಪಷ್ಟಪಡಿಸಿದ್ದಾರೆ. ರಷ್ಯಾದ ಈ ನಡೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ದೊಡ್ಡ ಹಿನ್ನಡೆಯಾಗಿದ್ದು, ಇವರಿಬ್ಬರ ಭೇಟಿ ನಡೆಸುವುದು ಎಣ್ಣೆ ಮತ್ತು ಸೀಗೆಕಾಯಿಯ ಮಿಶ್ರಣದಂತೆ ಎಂದು ಟ್ರಂಪ್ ಪ್ರತಿಕ್ರಿಯಿಸಿದ್ದಾರೆ.



## ಅಲ್ಕರಾಜ್ ಆಟಕ್ಕೆ ಹಿಮ್ಮೆಟ್ಟಿದ ರೀಲಿ ಓಪಲ್ಕ



ಅಮೇರಿಕ : ಸ್ಪೇನ್ ತಾರೆ ಕಾರ್ಲೋಸ್ ಅಲ್ಕರಾಜ್ ಅಮೆರಿಕ ಓಪನ್ ಟೆನಿಸ್ ಟೂರ್ನಿಯಲ್ಲಿ ಸೋಮವಾರ ಶುಭಾರಂಭ ಮಾಡಿದರು. ಆದರೆ, ಆತಿಥೇಯ ದೇಶದ ಅನುಭವಿ ಆಟಗಾರ್ತಿಯರಾದ ವೀನಸ್ ವಿಲಿಯಮ್ಸ್ ಮತ್ತು ಮ್ಯಾಡಿಸನ್ ಕೀಸ್ ಮೊದಲ ಸುತ್ತು ದಾಟಲು ವಿಫಲರಾದರು. ಎರಡನೇ ಶ್ರೇಯಾಂಕದ ಅಲ್ಕರಾಜ್ ಅವರು ಆರ್ಥರ್ ಆಯಷ್ ಕ್ರೀಡಾಂಗಣದಲ್ಲಿ ನಡೆದ ಮೊದಲ ಸುತ್ತಿನ ಹಣಾಹಣಿಯಲ್ಲಿ 6–4, 7–5, 6–4ರಿಂದ ಅತಿಥೇಯ ದೇಶದ ರೀಲಿ ಒಪೆಲ್ಕಾ ಅವರನ್ನು ಹಿಮ್ಮೆಟ್ಟಿಸಿ ಅಭಿಯಾನ ಆರಂಭಿಸಿದರು.

## ಅಹಮದಾಬಾದ್‌ನಲ್ಲಿ 2030ರ ಕಾಮನ್‌ವೆಲ್ತ್ ಕ್ರೀಡಾಕೂಟ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಗುಜರಾತ್‌ನ ಅಹಮದಾಬಾದ್‌ನಲ್ಲಿ 2030ರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸಲು ಬಿಡ್ ಸಲ್ಲಿಕೆ ಪ್ರಕ್ರಿಯೆಗೆ ಅನುಮೋದನೆ ನೀಡಲಾಗಿದೆ. ಬಿಡ್ ಯಶಸ್ವಿಯಾದರೆ ಕೇಂದ್ರವು ಗುಜರಾತ್ ಸರ್ಕಾರಕ್ಕೆ ಅಗತ್ಯ ಅನುದಾನ ನೀಡಲಿದೆ. ಕ್ರೀಡಾಕೂಟದ ಆತಿಥ್ಯ ವಹಿಸಲು ಅಹಮದಾಬಾದ್ ಯೋಗ್ಯ ನಗರವೆಂದು ಆಯ್ಕೆ ಮಾಡಲಾಗಿದೆ. ಬಿಡ್ ಸಲ್ಲಿಸಲು ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ಸಲ್ಲಿಸಿದ್ದ ಪ್ರಸ್ತಾವನೆಗೆ ಸಂಪುಟದಿಂದ ಒಪ್ಪಿಗೆ ಸೂಚಿಸಲಾಗಿದೆ.




## ಧರ್ಮದ ವಿಚಾರ ಬಂದಾಗ ಯಾವುದೇ ಹೋರಾಟಕ್ಕೂ ಸಿದ್ಧ : ಯದುವೀರ್



ಮೈಸೂರು : ಚಾಮುಂಡಿ ಬೆಟ್ಟ ಹಿಂದೂಗಳ ಆಸ್ತಿ ಎಂಬುದರಲ್ಲಿ ಎರಡು ಮಾತಿಲ್ಲ ಎನ್ನುವ ಮೂಲಕ ಡಿಸಿಎಂ ಡಿಕೆಶಿವಕುಮಾರ ಹೇಳಿಕೆಗೆ ಮೈಸೂರು ಸಂಸದ ಯದುವೀರ್ ಒಡೆಯರ್ ಆಕ್ಷೇಪ ವ್ಯಕ್ತಪಡಿಸಿದರು. ಅವರ ಹೇಳಿಕೆ ಹಾಸ್ಯಾಸ್ಪದ, ಆಘಾತಕಾರಿಯಾಗಿದೆ. ಗೌರಿ ವಿನಾಯಕನ ಪೂಜೆ ಸಂದರ್ಭದಲ್ಲಿ ಈ ರೀತಿ ಹೇಳಿಕೆ ಖಂಡನೀಯ. ಮಾರ್ಕಂಡೇಯರು ತಪಸ್ಸು ಮಾಡಿರುವ ಇತಿಹಾಸದ ಸ್ಥಳವಿದು. ಚಾಮುಂಡಿಬೆಟ್ಟಕ್ಕೆ ಸಾವಿರಾರು ವರ್ಷದ ಇತಿಹಾಸವಿದೆ. ನಮ್ಮ ಧರ್ಮದ ದುರ್ಬಳಕೆ ಮಾಡಿಕೊಳ್ಳಬಾರದು ಎಂದು ತಿರುಗೇಟು ನೀಡಿದರು.

## ಅನ್ನಭಾಗ್ಯ ಅಕ್ಕಿ ಕೊಪ್ಪಳದಿಂದ ದುಬೈಗೆ ಕಳ್ಳ ಸಾಗಾಟ?

ಕೊಪ್ಪಳ : ಕೊಪ್ಪಳ ಜಿಲ್ಲೆಯ ಗಂಗಾವತಿಯ ಕನಕಗಿರಿ ರಸ್ತೆಯಲ್ಲಿನ ಎಪಿಎಂಸಿ ಗೋದಾಮಿನಿಂದ ಅನ್ನಭಾಗ್ಯ ಯೋಜನೆಯ ಅಕ್ಕಿ ಕಳ್ಳ ಸಾಗಣೆ ಮಾಡುತ್ತಿರುವುದು ಪತ್ತೆಯಾಗಿದೆ. ಸರ್ಕಾರಿ ಗೋದಾಮಿನಲ್ಲಿದ್ದ ಅಕ್ಕಿಯನ್ನು 'ಲಾಲ್' ಹೆಸರಿನ ಬ್ರ್ಯಾಂಡ್‌ನ ಚೀಲಕ್ಕೆ ತುಂಬುತ್ತಿದ್ದ ಮಾಹಿತಿ ತಿಳಿದು ಕೆಲ ಸಂಘಟನೆ ಮುಖಂಡರು ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಈ ವೇಳೆ, ದುಬೈ ವಿಳಾಸ ಇರುವ, 25 ಕೆಜಿ ಸಾಮರ್ಥ್ಯದ ಸಾವಿರಾರು ಚೀಲಗಳಲ್ಲಿ ಅಕ್ಕಿ ತುಂಬುತ್ತಿರುವುದು ಪತ್ತೆಯಾಗಿದೆ. ವಿಷಯ ತಿಳಿದು ಗಂಗಾವತಿ ತಹಸೀಲ್ದಾರ್ ರವಿ ಅಂಗಡಿ ಹಾಗೂ ಗಂಗಾವತಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ.



## ಪಹಣಿಯಲ್ಲಿನ ತಿದ್ದುಪಡಿಗಳನ್ನು ಮಾಡಿಕೊಡಲು ವಿಶೇಷ ಅಭಿಯಾನ

ಬೆಂಗಳೂರು: ಸೆಪ್ಟಂಬರ್ 01ರಿಂದ ಹದಿನೈದು ದಿನಗಳ ಕಾಲ ಪಹಣಿಯಲ್ಲಿನ ಸಣ್ಣಪುಟ್ಟ ತಿದ್ದುಪಡಿಗಳನ್ನು ಮಾಡಿಕೊಡಲು ವಿಶೇಷ ಅಭಿಯಾನ ಆರಂಭಿಸಲಾಗುವುದು, ರೈತರು ಕೂಡಲೆ ತಮ್ಮ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಸಂಬಂಧಿಸಿದ ತಹಸಿಲ್ದಾರರಿಗೆ ಸಲ್ಲಿಸಬೇಕೆಂದು ರಾಜ್ಯ ಸರ್ಕಾರ ತಿಳಿಸಿದೆ. ಪಹಣಿ, ಆರ್‌ಟಿಸಿಯಲ್ಲಿನ ಲೋಪದೋಷಗಳ ತಿದ್ದುಪಡಿ ಅಧಿಕಾರವನ್ನು ಈ ಮೊದಲು ತಹಸಿಲ್ದಾರರಿಗೆ ನೀಡಲಾಗಿತ್ತು. ಆದರೆ ಇದೀಗ, ಈ ಅಧಿಕಾರವನ್ನು ಉಪವಿಭಾಗಾಧಿಕಾರಿಗಳಿಗೆ ವಹಿಸಲಾಗಿರುತ್ತದೆ. ಆರ್‌ಟಿಸಿಯಲ್ಲಿನ ಸಣ್ಣಪುಟ್ಟ ದೋಷಗಳಿಂದ ರೈತರಿಗೆ ಹಲವು ವಿಧದ ತೊಂದರೆಯಾಗುತ್ತಿದೆ.



## ವರ್ಷಕ್ಕೆ '04' ದಿನಗಳು ಮೀರದಂತೆ ಶಾಲೆಗಳಿಗೆ ಸ್ಥಳೀಯ ರಜೆ!

ಬೆಂಗಳೂರು : ರಾಜ್ಯದ ಶಾಲೆಗಳಿಗೆ ಸ್ಥಳೀಯ ರಜೆ ನೀಡುವ ಕುರಿತು ಶಿಕ್ಷಣ ಇಲಾಖೆ ಮಹತ್ವದ ಸುತ್ತೋಲೆ ಹೊರಡಿಸಿದೆ. ಶಾಲಾ ವಿದ್ಯಾರ್ಥಿಗಳ ಅವಶ್ಯಕತೆಗನುಸಾರವಾಗಿ ವರ್ಷಕ್ಕೆ '04' ದಿನಗಳು ಮೀರದಂತೆ ಶಾಲೆಗಳಿಗೆ ಸ್ಥಳೀಯ ರಜೆಯನ್ನು ಅನುಮೋದಿಸಲು ತಿಳಿಸಿದೆ. ಉಲ್ಲೇಖಿತ ಮಾನ್ಯ ಶಾಸಕರ ಪತ್ರದಲ್ಲಿ ಶಾಲಾ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಶಾಲೆಗೆ ನೀಡುವ ಸ್ಥಳೀಯ ರಜೆಯು ಶೈಕ್ಷಣಿಕ ವರ್ಷಕ್ಕೆ ನಾಲ್ಕು ನೀಡಬಹುದಾಗಿದೆ ಎಂದು ಶೈಕ್ಷಣಿಕ ಮಾರ್ಗದರ್ಶಿಯಲ್ಲಿ ತಿಳಿಸಲಾಗಿದೆ. ವರ್ಷಕ್ಕೆ '04' ದಿನಗಳು ಮೀರದಂತೆ ಶಾಲೆಗಳಿಗೆ ಸ್ಥಳೀಯ ರಜೆಯನ್ನು ಅನುಮೋದಿಸಲು ತಿಳಿಸಿದೆ.



## 85,000ಕ್ಕೂ ಅಧಿಕ ಹುದ್ದೆಗಳ ನೇಮಕಾತಿ ಆರಂಭ !



ಬೆಂಗಳೂರು : ಸರ್ಕಾರಿ ಹುದ್ದೆಯ ನಿರೀಕ್ಷೆಯಲ್ಲಿದ್ದವರಿಗೆ ಸಿಹಿಸುದ್ದಿಯೊಂದು ಸಿಕ್ಕಿದ್ದು, ಒಳ ಮೀಸಲಾತಿ ವರದಿ ಜಾರಿಯಾದ ಬೆನ್ನಲ್ಲೇ 85,000ಕ್ಕೂ ಅಧಿಕ ಹುದ್ದೆಗಳ ಭರ್ತಿ ಪ್ರಕ್ರಿಯೆ ಶೀಘ್ರದಲ್ಲೇ ಶುರುವಾಗಲಿದೆ. ರಾಜ್ಯದಲ್ಲಿ ಒಳ ಮೀಸಲಾತಿ ಕಾರಣಕ್ಕೆ 2024ರ ನವೆಂಬರ್‌ನಿಂದ ರಾಜ್ಯದಲ್ಲಿ ಸರ್ಕಾರಿ ಹುದ್ದೆಗಳ ಭರ್ತಿ ಪ್ರಕ್ರಿಯೆ ನನೆಗುದಿಗೆ ಬಿದ್ದಿದ್ದು, ಗಣಪತಿ ಹಬ್ಬ ಮುಗಿಯುತಿದ್ದಂತೆ ನೇಮಕಾತಿ ಪ್ರಕ್ರಿಯೆಗೆ ಚಾಲನೆ ಸಿಗಲಿದೆ. ರಾಜ್ಯದಲ್ಲಿ ಮಂಜೂರಾದ 7,76,414 ಹುದ್ದೆಗಳಿದ್ದು, 4,91,533 ಹುದ್ದೆಗಳು ಭರ್ತಿಯಾಗಿವೆ. 2,84,881 ಖಾಲಿ ಹುದ್ದೆಗಳಿವೆ.

## ತೋಟಗಾರಿಕೆ ಬೆಳೆ ಹಾನಿ ಪರಿಹಾರಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ

ಧಾರವಾಡ: ನವಲಗುಂದ, ಅಣ್ಣಿಗೇರಿ ಹಾಗೂ ಹುಬ್ಬಳ್ಳಿ ತಾಲೂಕು ಸೇರಿದಂತೆ ನವಲಗುಂದ ವಿಧಾನಸಭಾ ಕ್ಷೇತ್ರದಲ್ಲಿ ಪ್ರಸಕ್ತ ಮುಂಗಾರು ಮಳೆಯಿಂದ ಅಂದಾಜು 55 ಸಾವಿರ ಹೆಕ್ಟೇರ್ ಕೃಷಿ ಹಾಗೂ ತೋಟಗಾರಿಕಾ ಬೆಳೆಗಳು ಹಾಳಾಗಿದ್ದು ರೈತರಿಗೆ ಬೆಳೆಹಾನಿ ಮಂಜೂರಾತಿಗಾಗಿ ತಕ್ಷಣ ಸರ್ಕಾರಕ್ಕೆ ವರದಿ ಸಲ್ಲಿಸಲು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅಧಿಕಾರಿಕಾರಿಗಳಿಗೆ ಸೂಚಿಸಿದರು. ನವಲಗುಂದ ವಿಧಾನಸಭಾ ಕ್ಷೇತ್ರದ ನವಲಗುಂದ, ಅಣ್ಣಿಗೇರಿ ಹಾಗೂ ಹುಬ್ಬಳ್ಳಿ ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ಅವರು ಭೇಟಿ ನೀಡಿ, ಪರಿಶೀಲಿಸಿ, ಮಾತನಾಡಿದರು.



## ಕೊಳವೆ ಬಾವಿಗಳನ್ನು ಕೊರೆಯಲು ಅನುಮತಿ ಕಡ್ಡಾಯ

ಬೆಂಗಳೂರು : ಕೊಳವೆ ಬಾವಿಗಳನ್ನು ಕೊರೆಯಲು ಅನುಮತಿ ಪಡೆಯಬೇಕು ಜೊತೆಗೆ ವಿಫಲಗೊಂಡ ಬಾವಿಗಳನ್ನು ಮುಚ್ಚಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಲತಾಕುಮಾರಿ ಅವರು ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಕರ್ನಾಟಕ ಅಂತರ್ಜಲ ಅಭಿವೃದ್ಧಿ ಮತ್ತು ಅತಿ ಬಳಕೆ ನಿಯಂತ್ರಣ ಅಧಿನಿಯಮದಡಿ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಸಭೆ ನಡೆಸಿ ಮಾತನಾಡಿದ ಅವರು ವಿಫಲ ಕೊಳವೆ ಬಾವಿಗಳಲ್ಲಿ ಚಿಕ್ಕ ಮಕ್ಕಳು ಬಿದ್ದು ಸಾವಿಗೀಡಾಗುವ ಅವಘಡಗಳನ್ನು ತಪ್ಪಿಸಲು ಮುಂಜಾಗ್ರತೆವಹಿಸಿ ಮಣ್ಣು ಮತ್ತು ಕಲ್ಲುಗಳಿಂದ ಸಂಪೂರ್ಣವಾಗಿ ಮುಚ್ಚಿಗಿಡನೆಟ್ಟು ಸುರಕ್ಷಿತವಾಗಿಡಬೇಕು ಎಂದರು.



## ಟ್ರಂಪ್‌ನಿಂದ ನಾಲ್ಕು ಬಾರಿ ಕರೆ : ಕ್ಯಾರೇ ಎನ್ನದ ನರೇಂದ್ರ ಮೋದಿ!

ಅಮೇರಿಕ : ಭಾರತದಿಂದ ಆಮದು ಮಾಡಿಕೊಳ್ಳುವ ಸರಕುಗಳ ಮೇಲೆ ಶೇ 25ರಷ್ಟು ಹೆಚ್ಚುವರಿ ಸುಂಕ ವಿಧಿಸುವ ಸಂಬಂಧ ಕರಡು ಅಧಿಸೂಚನೆಯನ್ನು ಅಮೆರಿಕ ಹೊರಡಿಸಿದೆ. ಹೀಗಾಗಿ, ಅಮೆರಿಕದ ಮಾರುಕಟ್ಟೆ ಪ್ರವೇಶಿಸುವ ಭಾರತದ ಸರಕುಗಳ ಮೇಲಿನ ಒಟ್ಟು ಸುಂಕ ಈಗ ಶೇಕಡ 50 ಆಗಿದೆ. ಈ ಮಧ್ಯೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಾಲ್ಕು ಬಾರಿ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ಜೊತೆ ಮಾತನಾಡಲು ಪ್ರಯತ್ನಿಸಿದ್ದರು. ಆದರೆ, ಮೋದಿ ಅವರು ಟ್ರಂಪ್ ಜೊತೆ ದೂರವಾಣಿಯಲ್ಲಿ ಮಾತನಾಡಲು ನಿರಾಕರಿಸಿದ್ದಾರೆ ಎಂದು ಜರ್ಮನ್ ಪತ್ರಿಕೆ ಫ್ರಾಂಕ್‌ಫರ್ಟರ್ ಆಲ್ಗೆಮೈನ್ ವರದಿ ಮಾಡಿದೆ.



## ಆರ್ಥಿಕ ಸ್ಥಿತಿಯ ಬಗ್ಗೆ ಸಿಎಂ ರೇವಂತ್ ರೆಡ್ಡಿ ಮತ್ತೆ ಕಳವಳ



ಹೈದರಾಬಾದ್: ರಾಜ್ಯದ ಆರ್ಥಿಕ ಪರಿಸ್ಥಿತಿಯ ಬಗ್ಗೆ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಅವರು ಮತ್ತೊಮ್ಮೆ ನಿರಾಶೆ ವ್ಯಕ್ತಪಡಿಸಿದ್ದಾರೆ. ರಾಜ್ಯದ ಖಜಾನೆ ಬತ್ತಿ ಹೋಗಿದೆ. ಬಡವರಿಗೆ ಹಂಚಲು ಭೂಮಿಯೂ ಇಲ್ಲ ಎಂದು ಹೇಳಿದ್ದಾರೆ. ಇದಕ್ಕೆಲ್ಲಾ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳೇ ಕಾರಣ ಎಂದು ರಾಜಕೀಯ ಪಂಡಿತರು ವಿಶ್ಲೇಷಿಸಿದ್ದಾರೆ. ನಮ್ಮ ಆರ್ಥಿಕ ಸ್ಥಿತಿಯು ನಿರಾಶಾದಾಯಕವಾಗಿದೆ. ವಿಶ್ವಾಸದ ಕೊರತೆಯಿಂದ ಬ್ಯಾಂಕ್‌ಗಳು ಹೊಸ ಸಾಲ ಮಂಜೂರು ಮಾಡಲೂ ಹಿಂದೇಟು ಹಾಕುತ್ತಿವೆ. ಅಭಿವೃದ್ಧಿ ಯೋಜನೆಗಳಿಗೆ ಅಡ್ಡಿಯಾಗುತ್ತಿದೆ ಎಂದು ದೈನೇಯ ಸ್ಥಿತಿಯನ್ನು ಒಪ್ಪಿಕೊಂಡಿದ್ದರು.

## ಸಂತ್ರಸ್ತರಿಂದ ಮೇಲ್ಮನವಿಗೆ ಅವಕಾಶ ಕಲ್ಪಿಸಿದ ಸುಪ್ರೀಂ ಕೋರ್ಟ್

ನವದೆಹಲಿ : ಆರೋಪಿಗಳಿಗೆ ನ್ಯಾಯಸಮ್ಮತ ವಿಚಾರಣೆ ಮತ್ತು ಶಿಕ್ಷೆ ವಿರುದ್ಧ ಮೇಲ್ಮನವಿ ಸಲ್ಲಿಸುವ ಹಕ್ಕಿನ ಬಗ್ಗೆ ದಶಕಗಳ ಕಾಲ ಗಮನ ಹರಿಸಿದ್ದ ಭಾರತದ ನ್ಯಾಯವ್ಯವಸ್ಥೆ ಅಪರಾಧ ಕಾನೂನುಗಳ ಮರು ವಿಶ್ಲೇಷಣೆ ನಡೆಸಿ, ಆರೋಪಿಗಳನ್ನು ಖುಲಾಸೆಗೊಳಿಸಿದ ಸಂದರ್ಭದಲ್ಲಿ ಸಂತ್ರಸ್ತರು ಹಾಗೂ ಅವರ ಕುಟುಂಬದವರು ಕೂಡಾ ಈ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸುವ ಮಹತ್ವದ ಆದೇಶವನ್ನು ಸುಪ್ರೀಂ ಕೋರ್ಟ್ ನೀಡಿದೆ. ಇದುವರೆಗೆ ವಿಚಾರಣಾ ನ್ಯಾಯಾಲಯ ಅಥವಾ ಹೈಕೋರ್ಟ್‌ನಲ್ಲಿ ಆರೋಪಿಗಳ ದೋಷಮುಕ್ತಿಯಾದಲ್ಲಿ ಸರ್ಕಾರ ಅಥವಾ ದೂರುದಾರರು ಮಾತ್ರ ಮೇಲ್ಮನವಿ ಸಲ್ಲಿಸಲು ಅವಕಾಶವಿತ್ತು.



## ಪೆಟ್ರೋಲಿಯಂ ಉತ್ಪನ್ನಗಳನ್ನು ನಮ್ಮಿಂದ ಖರೀದಿಸಬೇಡಿ : ಜೈ ಶಂಕರ್

ನವದೆಹಲಿ: ನಿಮಗೆ ಸಮಸ್ಯೆ ಇದ್ದರೆ ನಮ್ಮಿಂದ ಸಂಸ್ಕರಿಸಿದ ಪೆಟ್ರೋಲಿಯಂ ಉತ್ಪನ್ನಗಳನ್ನು ಖರೀದಿಸಬೇಡಿ ಎಂದು ಭಾರತ ರಷ್ಯಾದಿಂದ ತೈಲ ಖರೀದಿಸುತ್ತಿರುವುದನ್ನು ವಿರೋಧಿಸುತ್ತಿರುವ ಅಮೆರಿಕ ಮತ್ತು ಯೂರೋಪ್ ದೇಶಗಳಿಗೆ ವಿದೇಶಾಂಗ ಸಚಿವ ಎಸ್.ಜೈಶಂಕರ್ ತಿರುಗೇಟು ನೀಡಿದ್ದಾರೆ. ರಿಯಾಯಿತಿ ದರದಲ್ಲಿ ರಷ್ಯಾದ ಕಚ್ಚಾತೈಲವನ್ನು ಖರೀದಿಸುವ ಮೂಲಕ ಭಾರತ ಭಾರೀ ಲಾಭ ಪಡೆಯುತ್ತಿದೆ ಎಂಬ ಅಮೆರಿಕದ ಟೀಕೆಯನ್ನು ತಿರಸ್ಕರಿಸಿದರು. ಭಾರತದ ತೈಲ ಖರೀದಿ ರಾಷ್ಟ್ರೀಯ ಮತ್ತು ಜಾಗತಿಕ ಹಿತಾಸಕ್ತಿಯಿಂದ ಕೂಡಿದೆ ಎಂದರು.



## ನನ್ನ ಕುರ್ಚಿಗೆ ಪ್ರಧಾನಿ ಮೋದಿ ಗೌರವ ನೀಡಬೇಕು : ಮಮತಾ

ಕೊಲ್ಕತ್ತಾ: ನನ್ನ ಕುರ್ಚಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನೀಡಬೇಕು ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ. ನಮ್ಮನ್ನು "ಕಳ್ಳರು" ಎಂದು ಕರೆಯುವ ಮೂಲಕ ಇಡೀ ರಾಜ್ಯವನ್ನು ಅಗೌರವಿಸುತ್ತಾರೆ ಎಂದು ನಾನು ಎಂದಿಗೂ ನಿರೀಕ್ಷಿಸಿರಲಿಲ್ಲ ಎಂದು ಹೇಳಿದ್ದಾರೆ. 'ಭ್ರಷ್ಟಾಚಾರ, ಅಪರಾಧ ಮತ್ತು ತೃಣಮೂಲ ಕಾಂಗ್ರೆಸ್ ಸಮಾನಾರ್ಥಕ ಪದಗಳು' ಎಂದು ಪ್ರಧಾನಿ ಮೋದಿ ಹೇಳಿದ್ದರು.






# ಗೌರಿ ಗಣೇಶ ಹಬ್ಬದ ಸಲುವಾಗಿ ಗಂಗೆ ಗೌರಿ ಟ್ರೇಲರ್ ಮತ್ತು ಹಾಡು ಬಿಡುಗಡೆ..

ಗೌರಿ ಗಣೇಶ ಹಬ್ಬದ ಪ್ರಯುಕ್ತ ಗಂಗೆ ಗೌರಿ ಚಿತ್ರದ ಟ್ರೇಲರ್ ಮತ್ತು ಹಾಡುಗಳ ಬಿಡುಗಡೆ ಕಾರ್ಯಕ್ರಮ ಶ್ರೀ ರೇಣುಕಾಂಬ ಸ್ಟುಡಿಯೋದಲ್ಲಿ ಅದ್ದೂರಿಯಾಗಿ ನಡೆಯಿತು. ಕುಡುಚಿ ಕ್ಷೇತ್ರದ ಮಾಜಿ ಶಾಸಕ ಪಿ.ರಾಜೀವ್, ಬಂಜಾರ ಸಂಸ್ಕೃತಿ ಹಾಗೂ ಭಾಷಾ ಆಕಾಡೆಮಿ ಅಧ್ಯಕ್ಷ ಡಾ.ಎ.ಆರ್.ಗೋವಿಂದಸ್ವಾಮಿ, ಡೇರಿಂಗ್ ಸ್ಟಾರ್ ಪ್ರಿಯಾಹಾಸನ್ ಮತ್ತು ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವನಾಥ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ತಂಡಕ್ಕೆ ಶುಭ ಹಾರೈಸಿದರು. ರಾಜ್ಯದ ಸಾಂಸ್ಕೃತಿಕ ನೆಲೆಗಟ್ಟಿನ ಮೇಲೆ, ಸಮಾಜ ನಿರ್ಮಾಣವಾಗುವಲ್ಲಿ ಕಲೆಯ ಪಾತ್ರ ಮಹತ್ವದ್ದಾಗಿದೆ. ಕಲೆಯ ಆಯಾಮಗಳು ಬೇರೆ ಬೇರೆ ಇರುತ್ತದೆ. ಪ್ರಸ್ತುತ ಪೌರಾಣಿಕ ಚಿತ್ರಗಳು ಸಮಾಜ, ಯುವ ಜನತೆಯನ್ನು ತಲುಪಬೇಕೆಂದು ಮಾಜಿ ಶಾಸಕ ಪಿ.ರಾಜೀವ್ ಅಭಿಪ್ರಾಯ ಪಟ್ಟರು. ಕಮರ್ಷಿಯಲ್ ಸಿನಿಮಾಗಳ ಮಧ್ಯೆ ಪೌರಾ




ಣಿಕ ಚಿತ್ರ ಮಾಡಿರುವ ನಿರ್ಮಾಪಕರ ಧೈರ್ಯಕ್ಕೆ ಮೆಚ್ಚಬೇಕಾಗಿದೆ. ಸಿನಿಮಾವು ತೆರೆ ಕಾಣುವ ತನಕ ನಿರ್ಮಾಪಕ, ನಿರ್ದೇಶಕರೊಂದಿಗೆ ಕಲಾವಿದರು, ತಂತ್ರಜ್ಞರು ಜತೆಯಾಗಿರಬೇಕು. ಒಂದು ಸಿನಿಮಾ ಗೆದ್ದರೆ ನೂರಾರು ಕುಟುಂಬಗಳಿಗೆ ಊಟ ಸಿಗುತ್ತದೆ. ಅದರಿಂದ ಎಲ್ಲಾ ಚಿತ್ರಗಳು ಹಣ ಮಾಡಬೇಕೆಂದು ಎನ್ನಾರ್ ಕೆ ವಿಶ್ವನಾಥ್ ಹೇಳಿದರು. ಹಿರಿಯ ನಟ ಗಣೇಶ್‌ರಾವ್ ಕೇಸರ್‌ಕರ್ ಶಿವನಾಗಿ ಕಾಣಿಸಿಕೊಂಡಿದ್ದು, ಇದು ಅವರ 350ನೇ ಚಿತ್ರ ಎಂಬುದು ವಿಶೇಷ. ಅಲ್ಲದೆ ಅವರು ಜಿ.ಆರ್. ಫಿಲಂಸ್ ಅಡಿಯಲ್ಲಿ ಎರಡನೇ ಕಾಣಿಕೆಯಾಗಿ ಗಂಗೆ ಗೌರಿ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ತುಳಜಾ ಬಾಯಿ, ರೂಪ. ಎಸ್. ದೊಡ್ಮನಿ, ಸುಮಿತ ಪ್ರವೀಣ್, ಬಸವರಾಜ್ ದೇಸಾಯಿ ಸಹ ನಿರ್ಮಾಪಕರಾಗಿದ್ದಾರೆ. ಚಿತ್ರಕಥೆ–ಸಾಹಿತ್ಯ ಮತ್ತು ನಿರ್ದೇಶನವನ್ನು ಬಿ.ಎ. (ಓಂಕಾರ್) ಪುರುಷೋತ್ತಮ್ ಮಾಡಿದ್ದಾರೆ. ರಂಗಭೂಮಿ ನಟಿ ರಾಣೆಬೆನ್ನೂರಿನ ರೂಪಾಲಿ ಮೂರು ಶೇಡ್‌ಗಳಲ್ಲಿ ಅಂದರೆ ಗೌರಿ ಪಾರ್ವತಿ, ದಾಕ್ಷಾಯಿಣಿ ಅವತಾರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಗಂಗೆಯಾಗಿ ನಿಖಿತಾಸ್ವಾಮಿ, ಉಳಿದಂತೆ ಜಯಸಿಂಹ ಮುಸೂರಿ, ಎಸ್ಕಾರ್ಟ್ ಶ್ರೀನಿವಾಸ್, ಜಿಮ್ ಶಿವು ಬಸವರಾಜ ದೇಸಾಯಿ, ಧನಲಕ್ಷ್ಮಿ, ಮಮತಗೌಡ, ಕು.ಋತುಸ್ಪರ್ಶ ಗೀತಾ, ರಕ್ಷಾ ಗೌಡ ನಟಿಸಿದ್ದಾರೆ. ರಾಜ್‌ಭಾಸ್ಕರ್ ಸಂಗೀತ, ಗೌರಿ ವೆಂಕಟೇಶ್ ಛಾಯಾಗ್ರಹಣ, ಸಂಕಲನ, ಗ್ರಾಫಿಕ್ಸ್, ಡಿಐ ಅನಿಲ್ ಅವರದ್ದಾಗಿದೆ. ಬೆಂಗಳೂರು, ಶ್ರೀರಂಗಪಟ್ಟಣ, ಮೈಸೂರು ಸುಂದರ ತಾಣಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಅತೀ ಹೆಚ್ಚು ಪೌರಾಣಿಕ ಮತ್ತು ಐತಿಹಾಸಿಕ ಸಿನಿಮಾಗಳನ್ನು ನಿರ್ದೇಶನ ಮಾಡಿರುವ ಬಿ.ಎ. ಪುರುಷೋತ್ತಮ್ ಅವರು ಸದ್ಯದಲ್ಲೇ ಗಿನ್ನಿಸ್ ದಾಖಲೆಗೆ ಎಂಟ್ರಿ ಕೊಡಲಿದ್ದಾರೆ.

# ‘ಡಾಕ್ಟ್ರಾ?? ಭಟ್ರಾ?’ ತುಳು ಸಿನಿಮಾ ಮುಹೂರ್ತ..

ಎಂ.ಎನ್.ಆರ್. ಪ್ರೊಡಕ್ಷನ್ ಸಂಸ್ಥೆಯ ಅಡಿಯಲ್ಲಿ ಡಾ. ಎಮ್ ಎನ್ ರಾಜೇಂದ್ರ ಕುಮಾರ್ ನಿರ್ಮಾಣದಲ್ಲಿ ತಯಾರಾಗುತ್ತಿರುವ ತುಳು ಚಲನಚಿತ್ರ ‘ಡಾಕ್ಟ್ರಾ?? ಭಟ್ರಾ?’ ಚಿತ್ರದ ಮುಹೂರ್ತ ಸಮಾರಂಭ ಕದ್ರಿ ಮಂಜುನಾಥನ ಸನ್ನಿಧಿಯಲ್ಲಿ ಜರಗಿತು. ನಂತರ ಮಾತಾನಾಡಿದ ನಿರ್ಮಾಪಕ ಡಾ. ರಾಜೇಂದ್ರ ಕುಮಾರ್, ನಮ್ಮ ಸಂಸ್ಥೆ 2009 ರಲ್ಲಿ ಆರಂಭಗೊಂಡು “ಜೋಗುಳ” ಎಂಬ ಮೆಗಾಧಾರಾವಾಹಿಯನ್ನು ಕಿರುತೆರೆಗೆ ಅರ್ಪಿಸಿದೆ. ಎಂ.ಡಿ. ಶ್ರೀಧರ್ ನಿರ್ದೇಶನದಲ್ಲಿ ಪ್ರಜ್ವಲ್ ದೇವರಾಜ್ ಅಭಿನಯದ “ಗಲಾಟೆ” ಎಂಬ ಸಿನಿಮಾ ನಿರ್ಮಾಣವಾಗಿದೆ. ಇದೀಗ ಎರಡನೇ ಸಿನಿಮಾವನ್ನು ವಿಜಯ ಕುಮಾರ್ ಕೊಡಿಯಾಲ್‌ಬೈಲ್ ಅವರ ಕಥೆ, ಸಂಭಾಷಣೆ ಹಾಗೂ ನಿರ್ದೇಶನದಲ್ಲಿ “ಡಾಕ್ಟ್ರಾ–ಭಟ್ರಾ?” ಎಂಬ ಸಿನಿಮಾವನ್ನು ತುಳು ಭಾಷೆಯಲ್ಲಿ ಎಂಎನ್‌ಆರ್ ಪ್ರೊಡಕ್ಷನ್ ಸಂಸ್ಥೆ ತುಳು ಭಾಷೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನಿರ್ಮಿಸುತ್ತಿದ್ದೇವೆ ಎಂದರು.




# ‘ನೆತ್ತೆರೆಕೆರೆ’ ಆಗೋಸ್ಟ್ 29 ರಂದು ತೆರೆಗೆ..

ಅಸ್ತ್ರ ಪ್ರೊಡಕ್ಷನ್ ಲಾಂಛನದಲ್ಲಿ ಸ್ವರಾಜ್ ಶೆಟ್ಟಿ ನಿರ್ದೇಶನದಲ್ಲಿ ಲಂಚುಲಾಲ್ ಕೆ ಎಸ್ ನಿರ್ಮಾಣದಲ್ಲಿ ತಯಾರಾದ “ನೆತ್ತೆರೆಕೆರೆ” ತುಳು ಸಿನಿಮಾ ಆಗೋಸ್ಟ್ 29ರಂದು ಕರಾವಳಿ ಜಿಲ್ಲೆಯಾದ್ಯಂತ ತೆರೆಕಾಣಲಿದೆ. ನೆತ್ತೆರೆಕೆರೆ ಸಿನಿಮಾ ಹೊಸ ಸಂಚಲನವನ್ನು ಸೃಷ್ಟಿಸಲಿದೆ. ಇದು ವಿಭಿನ್ನ ಬಗೆಯ ಕಮರ್ಷಿಯಲ್ ಚಿತ್ರವಾಗಿದೆ. ಪಾತ್ರಗಳು ಭಿನ್ನವಾಗಿದೆ, ಸಿನಿಮಾದ ಬಗ್ಗೆ ಪ್ರೇಕ್ಷಕರಲ್ಲಿ ಕಾತರ, ಕುತೂಹಲ ಹೆಚ್ಚಿದೆ. ಸಿನಿಮಾಕ್ಕೆ ಚೇಳಾರ್, ಮುಲ್ಕಿ, ಕಿನ್ನಿಗೋಳಿಯಲ್ಲಿ ಚಿತ್ರೀಕರಿಸಲಾಗಿದೆ. ಸಿನಿಮಾಕ್ಕೆ ಚಿತ್ರಕತೆ, ಸಂಭಾಷಣೆಯೊಂದಿಗೆ ನಿರ್ದೇಶನದ ಜವಾಬ್ದಾರಿಯನ್ನೂ ವಹಿಸಿಕೊಂಡಿದ್ದಲ್ಲದೆ ನಾಯಕ ನಟನಾಗಿಯೂ ಅಭಿನಯಿಸಿದ್ದೇನೆ ಎಂದು ನಗರದ ಖಾಸಗಿ ಹೋಟೇಲಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ನಿರ್ದೇಶಕ ಸ್ವರಾಜ್ ಶೆಟ್ಟಿ ತಿಳಿಸಿದರು. ನಾಯಕಿಯಾಗಿ ದಿಶಾಲಿ ಪೂಜಾರಿ, ಬಹುಭಾಷಾ ನಟ ಸುಮನ್ ತಲ್ವಾರ್, ಲಂಚುಲಾಲ್ ಕೆ ಎಸ್ ಮುಖ್ಯ ಪಾತ್ರದಲ್ಲಿದ್ದಾರೆ.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, ‘A’ 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212